Modal ಕಾರಿಡಾರ್ ಆಗಿ ಮುಂದೆ ಕಾರ್ಯ ನಿರ್ವಹಿಸಬೇಕಿದ್ದು, ಪ್ರಸ್ತಾಪಿತ ಅಗಲವು ಅವಶ್ಯವಾಗಿರುತ್ತದೆ

920(739) ಶ್ರೀ ನರಸಿಂಹಸ್ವಾಮಿ ಜೆ (ದೊಡ್ಡಬಳ್ಳಾಪುರ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಅಕ್ರಮ ಮರಳು ಗಣಿಗಾರಿಕೆ ಅವ್ಯಾಹತವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ಪ್ರತಿ ಲಾರಿಗಳು ಓವರ್ ಲೋಡ್ ಹಾಕಿಕೊಂಡು ಸಂಚರಿಸುವುದರಿಂದ ಗ್ರಾಮಾಂತರ ರಸ್ತೆಗಳು ಹಾಳಾಗಿ ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿರುವುದಿಲ್ಲವೆ,

ಇ) ಹಾಗಿದ್ದಲ್ಲಿ, ಸಂಬಂಧಿಸಿದ ಇಲಾಖೆಗಳು ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮುಖ್ಯಮಂತ್ರಿಗಳು)

ಅ) ಸರ್ಕಾರದ ಗಮನಕ್ಕೆ ಬಂದಿದೆ

ಆ) ಮರಳು ಸಾಗಾಣಿಕೆ ಲಾರಿಗಳು ಓವರ್‌ಲೋಡ್ ಹಾಕಿಕೊಂಡು ಸಂಚರಿಸುವುದರಿಂದ ಗ್ರಾಮಾಂತರ ರಸ್ತೆಗಳು ಹಾಳಾಗುತ್ತಿರುವುದು ಹಾಗೂ ಕೆಲವು ಸಾರ್ವಜನಿಕರು ಈ ಬಗ್ಗೆ ದೂರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ

ಇ) ಅನಧಿಕೃತ ಮರಳು ಗಣಿಗಾರಿಕೆಯನ್ನು ನಿಯಂತ್ರಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ ಸಿಐ 05 ಎಂಎಂಎನ್ 2005, ದಿನಾಂಕ 6–8–2005ರಲ್ಲಿ ಜಿಲ್ಲಾ ಮಟ್ಟದ ಉಸ್ತುವಾರಿ ಸಮಿತಿಯನ್ನು ರಚಿಸಿದೆ ಈ ಸಮಿತಿಯಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪೊಲೀಸ್ ಅಧಿಕಾರಿಗಳು, ಪ್ರಾದೇಶಿಕ ಸಾರಿಗೆ ಅಧಿಕಾರಿ, ಸಂಬಂಧಪಟ್ಟ ತಹಶೀಲ್ದಾರ್ ಮತ್ತು ಜಿಲ್ಲೆಯ ಹಿರಿಯ ಭೂವಿಜ್ಞಾನಿ/ಉಪ ನಿರ್ದೇಶಕರು ಸದಸ್ಯರಾಗಿರುತ್ತಾರೆ ಅಂತೆಯೇ ಅಕ್ರಮ ಗಣಿಗಾರಿಕೆ/ಅನಧಿಕೃತ ಸಾಗಾಣಿಕೆ ತಡೆಗಟ್ಟಲು ರಾಜ್ಯ ಮಟ್ಟದಲ್ಲಿ, ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಹಾಗೂ ಜಿಲ್ಲಾ ಮಟ್ಟದಲ್ಲಿ ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಟಾಸ್ಕ್‌ಫೋರ್ಸ್ ಸಮಿತಿಗಳನ್ನು ಸಹ ರಚಿಸಲಾಗಿದೆ ಅನಧಿಕೃತವಾಗಿ ಮರಳು ಸಾಗಾಣಿಕೆ ಮಾಡುವ ಲಾರಿಗಳನ್ನು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳು ತಪಾಸಣೆ ನಡೆಸಿ, 22 ಪ್ರಕರಣಗಳಲ್ಲಿ ದೂರು ದಾಖಲಿಸಲಾಗಿದೆ ಹಾಗೂ ರೂ 20 63 ಲಕ್ಷಗಳನ್ನು ದಂಡದ ರೂಪದಲ್ಲಿ ವಸೂಲಿ ಮಾಡಲಾಗಿದೆ ಜಿಲ್ಲಾ

ಟಾಸ್ಕ್ ಫೋರ್ಸ್ ಸಮಿತಿ ಮತ್ತು ಸಾರಿಗೆ ಇಲಾಖೆಯ ಅಧಿಕಾರಿಗಳು ಅಧಿಕ ಪ್ರಮಾಣ ಮರಳು ಸಾಗಾಣಿಕೆ ಮಾಡುತ್ತಿರುವ ಲಾರಿಗಳನ್ನು ತಪಾಸಣೆ ನಡೆಸಿ ನಿಯಮಗಳ ರೀತ್ಯ ಸೂಕ್ತ ಕ್ರಮ ಜರುಗಿಸುತ್ತಿದ್ದಾರೆ

ದಿನಾಂಕ 13–11–2006ರಂದು ಸರ್ಕಾರದ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ಅನಧಿಕೃತ ಮರಳು ಗಣಿಗಾರಿಕೆಯ ವಿಷಯವನ್ನು ಚರ್ಚಿಸಿ, ಅನಧಿಕೃತ ಮರಳು ಗಣಿಗಾರಿಕೆಯಿಂದಾಗಿ ಅನಧಿಕೃತ ಮರಳು ಸಾಗಾಣಿಕೆ ಆಗುತ್ತಿರುವುದರಿಂದ ಅನಧಿಕೃತ ಮರಳು ಗಣಿಗಾರಿಕೆಗಳ ಮೂಲಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೂಡಲೆ ಮುಂದಿನ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಹಾಗೂ ಅನಧಿಕೃತ ಮರಳು ಗಣಿಗಾರಿಕೆಯನ್ನು ತೊಡಗಿರುವವರ ವಿರುದ್ಧ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲು ಮಾಡುವಂತೆ ಹಾಗೂ ಯಂತ್ರೋಪಕರಣಗಳನ್ನು ವಶಪಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ಉಪ ನಿರ್ದೇಶಕರು, ಗಣಿ ಮತ್ತು ಭೂ ವಿಜ್ಞಾನ ಇಲಾಖೆ, ಕನಕಮರ ಇವರಿಗೆ ಸೂಚಿಸಲಾಯಿತು

ದಿನಾಂಕ 18–1–2007ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಒಳಾಡಳಿತ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅಧಿಕಭಾರ ಹೇರಿರುವ ವಾಹನದ ತಪಾಸಣೆಗಾಗಿ ಸಂಚಾರಿ ದಳಗಳನ್ನು ರಚಿಸಲು, ವೇ ಬ್ರಿಡ್ಜ್‌ಗಳನ್ನು ನಿರ್ಮಿಸಲು ಮತ್ತು ತಪಾಸಣಾ ಕೇಂದ್ರಗಳನ್ನು ಸ್ಥಾಪಿಸಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲು ತೀರ್ಮಾನಿಸಲಾಗಿರುತ್ತದೆ

921(740) ಶ್ರೀ ನರಸಿಂಹಸ್ವಾಮಿ ಜೆ (ದೊಡ್ಡಬಳ್ಳಾಪುರ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಗುಂಡಂಗೆರೆ, ಹೊಸಹಳ್ಳಿ ಮತ್ತು ತೂಬಗೆರೆ ಗ್ರಾಮಗಳಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ವಿದ್ಯುತ್ ಉಪ ಕೇಂದ್ರಗಳಲ್ಲಿ ಕಾಮಗಾರಿ ಈಗ ಯಾವ ಹಂತದಲ್ಲಿದೆ,

ಆ) ಈ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು,

ಇ) ಕಾಮಗಾರಿಯನ್ನು ತಕ್ಷಣ ತೆಗೆದುಕೊಳ್ಳಲು ಸರ್ಕಾರಕ್ಕೆ ಇರುವ ತೊಂದರೆಗಳೇನು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)